# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03.04.2024 / 18.40 hrs**

ಮುಖ್ಯಾಂಶಗಳು

- ಜನರ ಜೀವನ ಸುಧಾರಣೆಗೆ ತಮ್ಮ ಸರ್ಕಾರ ಆದ್ಯತೆ ನೀಡಿದೆ; ಮುಖ್ಯಮಂತ್ರಿ ಸಿದ್ದರಾಮಯ್ಯ
- ಕೊರೋನಾ ಸಂಕಷ್ಟದಲ್ಲಿ ಸ್ಪಂದಿಸಿದ ಕಾಂಗ್ರೆಸ್ ಪಕ್ಷಕ್ಕೆ ಜನ ಬೆಂಬಲ ದೊರೆಯಲಿದೆ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಇದೇ ೨೬ರ ಚುನಾವಣೆಗೆ ನಾಮಪತ್ರ ಸಲ್ಲಿಸಲು ನಾಳೆ ಕಡೆ ದಿನ; ಇಂದು ಪ್ರಮುಖ ಅಭ್ಯರ್ಥಿಗಳಿಂದ ಉಮೇದುವಾರಿಕೆ
- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದುವರೆದ ಮತದಾರರ ಜನಜಾಗೃತಿ ಕಾರ್ಯಕ್ರಮ

*********************

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತರಿದ್ದರು. ಬಳಿಕ ಏರ್ಪಡಿಸಲಾಗಿದ್ದ, ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜನರ ಜೀವನ ಸುಧಾರಣೆಗೆ ತಮ್ಮ ಸರ್ಕಾರ ಆದ್ಯತೆ ನೀಡಿದೆ ಎಂದು ತಿಳಿಸಿದರು. ಎರಡನೇ ಬಾರಿ ಮುಖ್ಯಮಂತ್ರಿಯಾಗಿ ಎಂಟು ತಿಂಗಳಲ್ಲಿ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿ ಪ್ರತೀ ಫಲಾನುಭವಿ ಕುಟುಂಬಗಳಿಗೆ ತಿಂಗಳಿಗೆ ೪-೫ ಸಾವಿರ ಉಳಿತಾಯ ಆಗುತ್ತಿದೆ. ಇದರಿಂದ ಜನರ ಸಂಕಷ್ಟ ಕಡಿಮೆಯಾಗುತ್ತಿದೆ ಎಂದರು. ಮೈಸೂರು-ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಕುವೆಂಪು ಆಶಯವನ್ನು ಪಾಲಿಸುತ್ತಿದ್ದಾರೆ ಎಂದರು. ಬರಗಾಲ ಪರಿಹಾರ ವಿಳಂಬ ಕುರಿತು ಪ್ರತಿಕ್ರಿಯಿಸಿದ ಅವರು, ಕೇಂದ್ರ ತಂಡ ಬರಗಾಲದ ವರದಿ ನೀಡಿ ಐದು ತಿಂಗಳಾಯಿತು. ಇವತ್ತಿನವರೆಗೂ ಕನ್ನಡಿಗರ ಪಾಲಿನ ಒಂದೇ ಒಂದು ರೂಪಾಯಿ ಪರಿಹಾರ ಬಿಡುಗಡೆ ಮಾಡಿಲ್ಲ ಎಂದು ಕೇಂದ್ರ ಸರ್ಕಾರವನ್ನು ದೂಡಿದರು.

*********************

ಚಾಮರಾಜನಗರದಲ್ಲಿ ಇಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಸ್ಥಿತರಿದ್ದರು. ನಾಮಪತ್ರ ಸಲ್ಲಿಕೆ ನಂತರ ಮಾತನಾಡಿದ ಅವರು, ಕೊರೋನಾ ಸಂಕಷ್ಟದಲ್ಲಿ ಕಾಂಗ್ರೆಸ್ ಪಕ್ಷ ಜನರಿಗೆ ಆಮ್ಲಜನಕ ಪೂರೈಸಿದ್ದನ್ನು ಮರೆತಿಲ್ಲ. ತಮ್ಮ ಪಕ್ಷ ಕೊಟ್ಟ ಮಾತನ್ನು ಉಳಿಸಿಕೊಂಡಿದೆ. ಐದು ಗ್ಯಾರಂಟಿಗಳನ್ನು ಜಾರಿಗೆ ತರಲಾಗಿದೆ ಎಂದರು. ಉಚಿತ ಅಕ್ಕಿ, ಬಸ್ ಪ್ರಯಾಣ, ೨ ಸಾವಿರ ಗೃಹಲಕ್ಷ್ಮಿ ಹಣ ಸೇರಿದಂತೆ ಎಲ್ಲ ಯೋಜನೆಗಳು ಜನರಿಗೆ ತಲುಪುತ್ತಿವೆ. ಈಗ ಜನರು ಮತದಾರರು ತಮ್ಮ ಪಕ್ಷದ ಅಭ್ಯರ್ಥಿಗೆ ಆಶೀರ್ವಾದ ಮಾಡಲಿದ್ದಾರೆ ಎಂಬ ವಿಶ್ವಾಸವಿದೆ ಎಂದು ತಿಳಿಸಿದರು.

*********************

ಪ್ರಸಕ್ತ ಲೋಕಸಭಾ ಚುನಾವಣೆಯ ರಾಜ್ಯದ ಮೊದಲ ಹಂತದಲ್ಲಿ ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಸಲು ನಾಳೆ ಕಡೆಯ ದಿನವಾಗಿದ್ದು, ಇಂದು ವಿವಿಧ ರಾಜಕೀಯ ಪಕ್ಷಗಳ ಹಾಗೂ ಸ್ವತಂತ್ರ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಆಗಿದೆ. ಅಭ್ಯರ್ಥಿಗಳು ರೋಡ್ ಶೋ, ಸಾರ್ವಜನಿಕ ಸಭೆ ಬಳಿಕ ಆಯಾ ಕ್ಷೇತ್ರದ ಚುನಾವಣಾಧಿಕಾರಿಗಳ ಕಚೇರಿಗೆ ತೆರಳಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಇಂದು ಉಮೇದುವಾರಿಕೆ ಸಲ್ಲಿಸಿದವರಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಕೋಟ ಶ್ರೀನಿವಾಸ ಪೂಜಾರಿ, ಮೈಸೂರು ರಾಜ ವಂಶಸ್ಥ ಯದುವೀರ್ ಕೃಷ್ಣರಾಜದತ್ತ ಒಡೆಯರ್, ಮಾಜಿ ಸಚಿವ ವಿ.ಸೋಮಣ್ಣ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೋ. ಎಂ.ವಿ. ರಾಜೀವ್ ಗೌಡ ಪ್ರಮುಖರಾಗಿದ್ದಾರೆ. ಮಾರ್ಚ್ ೨೮ರಿಂದ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಿದ್ದು, ನಿನ್ನೆಯವರೆಗೆ ೧೫೨ ಮಂದಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಅದರಲ್ಲಿ ೧೩೫ ಪುರುಷ, ೧೭ ಮಹಿಳಾ ಅಭ್ಯರ್ಥಿಗಳು

ಉಮೇದುವಾರಿಕೆ ಸಲ್ಲಿಸಿದ್ದಾರೆ. ಬಿಜೆಪಿಯಿಂದ ೯, ಕಾಂಗ್ರೆಸ್‌ನಿಂದ ೮, ಬಿಎಸ್‌ಪಿಯಿಂದ ೫ ಹಾಗೂ ಜೆಡಿಎಸ್‌ನಿಂದ ಇಬ್ಬರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಶೋಭಾಕರಂದ್ಲಾಜೆ ನಗರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ತಮ್ಮ ಉಮೇದುವಾರಿಕೆಯನ್ನು ಚುನಾವಣಾಕಾರಿಗಳಿಗೆ ಸಲ್ಲಿಸಿದರು. ನಾಳೆ ಬೆಂಗಳೂರು ದಕ್ಷಿಣ ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ನಾಮಪತ್ರ ಸಲ್ಲಿಸುವುದಾಗಿ ತಿಳಿಸಿದ್ದಾರೆ. ಈ ವೇಳೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವರಾದ ಅನುರಾಗ್‌ಸಿಮಗ್ ಠಾಕೂರ್ ಹಾಗೂ ರಾಜ್ಯದ ಸ್ಥಳೀಯ ನಾಯಕರು ಸಾಥ್ ನೀಡಲಿದ್ದಾರೆ.

ಮೈಸೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಯದುವೀರ್ ಕೃಷ್ಣರಾಜದತ್ತ ಒಡೆಯರ್, ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು. ತುಮಕೂರು ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ರೋಡ್ ಶೋ ನಡೆಸಿದ ಬಳಿಕ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್. ಬಾಲರಾಜ್, ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರು ನಾಮಪತ್ರ ಸಲ್ಲಿಸಿದರು. ಉಡುಪಿ- ಚಿಕ್ಕಮಗಳೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಅವರು ತಮ್ಮ ನಾಮಪತ್ರ ಸಲ್ಲಿಸಿದರು.

ಮೈಸೂರು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ಅವರು ಬಿಬಿಎಂಪಿ ಕಚೇರಿಯಲ್ಲಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ರಕ್ಷಾ ರಾಮಯ್ಯ ಇಂದು ತಮ್ಮ ನಾಮಪತ್ರವನ್ನು ಚುನಾವಣಾಧಿಕಾರಿ ಪಿ.ಎನ್.ರವೀಂದ್ರ ಅವರಿಗೆ ಸಲ್ಲಿಸಿದರು.
ಬೆಂಗಳೂರು ಉತ್ತರ ಲೋಕ ಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಎಂ.ವಿ ರಾಜೀವ್ ಗೌಡ ನಾಮಪತ್ರ ಸಲ್ಲಿಸಿದರು ಕೋಲಾರ ಮೀಸಲು ಲೋಕಸಭಾ ಕ್ಷೇತ್ರಕ್ಕೆ ಇಂದು ೨ ನಾಮಪತ್ರ ಸಲ್ಲಿಕೆಯಾಗಿದೆ. ಇದುವರೆಗೆ ಕೋಲಾರ ಕ್ಷೇತ್ರದಲ್ಲಿ ೭ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ಮಾಹಿತಿ ನೀಡಿದ್ದಾರೆ. ಚಿತ್ರದುರ್ಗ ಲೋಕಸಭೆಗೆ ಇಂದು ಆರು ನಾಮಪತ್ರ ಸಲ್ಲಿಕೆಯಾಗಿವೆ. ಒಟ್ಟಾರೆ ಚಿತ್ರದುರ್ಗ ಲೋಕಸಭೆಗೆ ಹನ್ನೊಂದು ನಾಮಪತ್ರ ಸಲ್ಲಿಕೆಯಾಗಿದ್ದು, ನಾಮಪತ್ರ ಸಲ್ಲಿಸಲು ನಾಳೆ ಕೊನೆಯದಿನವಾಗಿದೆ.

*********************

ಲೋಕಸಭಾ ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ರಾಜ್ಯದ್ಯಂತ ವಿವಿಧ ಜಿಲ್ಲೆಗಳಲ್ಲಿ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿ ವತಿಯಿಂದ ಉತ್ತರಕನ್ನಡ ಜಿಲ್ಲೆಯಲ್ಲಿ ಹಲವು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಮತದಾನ ಪ್ರತಿಜ್ಞಾವಿಧಿ ಭೋಧನೆ ಹಾಗೂ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಸಿದ್ಧಾಪುರದಲ್ಲಿ ಚಾಲನೆ ನೀಡಿದರು. ಗದಗ ಜಿಲ್ಲೆಯ ವಾಸನ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮ ಜರುಗಿತು. ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಮಲ್ಲಪ್ಪ ವಾಲಿ ಮಾತನಾಡಿ, ಮೇ ೭ ರಂದು ಲೋಕಸಭಾ ಚುನಾವಣೆಗೆ ಮತದಾನ ಹಿನ್ನಲೆ ಕಡ್ಡಾಯವಾಗಿ ಎಲ್ಲರೂ ತಪ್ಪದೇ ಮತದಾನ ಚಲಾಯಿಸಬೇಕೆಂದು ತಿಳಿಸಿದರು. ಮಂಡ್ಯ ಲೋಕಸಭಾ ಚುನಾವಣೆ ಹಿನ್ನಲೆ ಮಾರಗೌಡನಹಳ್ಳಿ ಗ್ರಾಮದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ ವತಿಯಿಂದ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಸಂಜೀವಪ್ಪ ಅಧ್ಯಕ್ಷತೆಯಲ್ಲಿ ಸ್ವೀಪ್ ಕಾರ್ಯಕ್ರಮವನ್ನು ನಡೆಸಲಾಯಿತು.

ಗದಗ ಜಿಲ್ಲೆಯ ನರಗುಂದ ತಾಲೂಕಿನ ಶಿರೋಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಚುನಾವಣಾ ಜಾಗೃತಿ ಜಾಥಾ ಕಾರ್ಯಕ್ರಮ ಬುಧವಾರ ಜರುಗಿತು.

ಸಹಾಯಕ ಚುನಾವಣಾಧಿಕಾರಿ ಡಾ. ಹಂಪಣ್ಣ ಸಜ್ಜನ ಮಾತನಾಡಿ, ಮತದಾನ ನಮ್ಮ ಹಕ್ಕು ಮತದಾನದ ದಿನವಾದ ಮೇ ೭ ರಂದು ಕಡ್ಡಾಯವಾಗಿ ತಪ್ಪದೇ ಮತ ಚಲಾಯಿಸಬೇಕೆಂದು ತಿಳಿಸಿದರು.

ಮತದಾನ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಕೊಪ್ಪಳ ತಾಲೂಕಿನ ಬಂಡಿಹರ್ಲಾಪುರ ಗ್ರಾಮ ಪಂಚಾಯತಿಯಿಂದ ಇಂದು ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

*********************

ಈಗ ಬಾಗಲಕೋಟೆ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಪರಶುರಾಮ್ ಪೇಟಕರ್

ಬಾಗಲಕೋಟೆ ಒಂದು ಕಾಲದಲ್ಲಿ ಪ್ರಸಿದ್ಧ ಚಾಲುಕ್ಯರಾಜ ವಂಶವು ಆಳಿದ ಭವ್ಯ ಇತಿಹಾಸದ ಕುರುವು ಇರುವ ಕೇಂದ್ರಸ್ಥಾನವಾಗಿದೆ. ಭಾಗಲಕೋಟೆ ಜಿಲ್ಲೆಯ ಉತ್ತರ ಭಾಗದಲ್ಲಿ ವಿಜಯಪುರ ಜಿಲ್ಲೆಯೂ, ದಕ್ಷಿಣ ಭಾಗದಲ್ಲಿ ಗದಗ ಜಿಲ್ಲೆಯೂ ಸುತ್ತುವರೆದಿದೆ. ಈ ಬಾಗಲಕೋಟೆ ಜಿಲ್ಲೆ ಅಖಂಡ ವಿಜಯಪುರದಲ್ಲಿತ್ತು. ಭಾರತದ ೫೦ನೇ ಸ್ವಾತಂತ್ರ್ಯ ಆಚರಣೆ ಸಂದರ್ಭದಲ್ಲಿ ಅಂದ್ರೆ ೧೯೯೭ರಲ್ಲಿ ಪ್ರತ್ಯೇಕ ಜಿಲ್ಲೆಯಾಗಿ ರೂಪಗೊಂಡಿತು.

ಬಾಗಲಕೋಟೆ ಜಿಲ್ಲೆಯಲ್ಲಿ ಬಾದಾಮಿ, ಬಾಗಲಕೋಟೆ, ಬೀಳಗಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ಎಂಬ ಆರು ತಾಲೂಕುಗಳನ್ನು ಹೊಂದಿದೆ. ೨೦೧೮ರಲ್ಲಿ ಗುಳೇದಗುಡ್ಡ , ಇಳಕಲ್, ರಬಕವಿ-ಬನಹಟ್ಟಿ ಎಂಬ ಮೂರು ಹೊಸ ತಾಲೂಕು ಕೇಂದ್ರಗಳು ಸೃಷ್ಠಿಯಾಗಿವೆ. ಈ ಬಾಗಲಕೋಟೆ ಆಲಮಟ್ಟಿ ಆಣೆಕಟ್ಟು ನಿರ್ಮಾಣಕ್ಕೆ ಮುಳುಗಡೆ ಹೊಂದಿ ನವನಗರ ಸೃಷ್ಠಿಯಾಗಿತು. ಈಗ ಮುಳುಗಡೆ ಜಿಲ್ಲೆ ಎಂಬ ಹಣೆಪಟ್ಟಿ ಪಡೆದ ಬಾಗಲಕೋಟೆ ಜಿಲ್ಲೆಯಲ್ಲಿ ನರಗುಂದ ವಿಧಾನ ಸಭಾ ಕ್ಷೇತ್ರವೂ ಸೇರಿ ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳ ಒಳಗೊಂಡ ಲೋಕಸಭಾ ಕ್ಷೇತ್ರವಾಗಿದೆ. ಬಾಗಲಕೋಟೆ ಲೋಕಸಭಾ ಕ್ಷೇತ್ರದಲ್ಲಿ ೨೦೨೪ ರ ಚುನಾವಣೆಯ ಕಾವು ರಂಗೇರುತ್ತಿದೆ.

ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿರುವ ೭ ಮತಕ್ಷೇತ್ರ ಹಾಗೂ ಗದಗ ಜಿಲ್ಲೆಯ ನರಗುಂದ ಮತಕ್ಷೇತ್ರ ಸೇರಿ ಒಟ್ಟು ೧೭೮೧೩೯೫ ಮತದಾರರು ಮೇ ೭ರಂದು ಮತದಾನದ ಮೂಲಕ ತಮ್ಮ ಹಕ್ಕನ್ನು ಚಲಾಯಿಸಲಿದ್ದಾರೆ. ಮಾದರಿ ನೀತಿ ಸಂಹಿತೆ ಪಾಲನೆಗೆ ವಿವಿಧ ತಂಡಗಳನ್ನು ರಚಿಸಲಾಗಿದ್ದು, ಚೆಕ್ಪೋಸ್ಟಗಳನ್ನು ಕೂಡಲೇ ಕಾರ್ಯಗತಗೊಳಿಸಲಾಗಿದೆ. ಚುನಾವಣೆಗೆ ಸಂಬಂಧಿಸಿದಂತೆ ೨೭ ಚೆಕ್ಪೋಸ್ಟ್. ೧೫೮ ಸೆಕ್ಟರ ಅಧಿಕಾರಿಗಳು, ೬೭ ಫ್ಲೆಯಿಂಗ್ ಸ್ಕ್ವಾಡ್, ೭೮ ಸ್ಟ್ಯಾಂಟಿಕ ಸರ್ವಲೆನ್ಸ ತಂಡ, ೨೫ ವಿಡಿಯೋ ಸರ್ವಲೆನ್ಸ ಹಾಗೂ ೮ ವಿಡಿಯೋ ವೀವಿಂಗ್ ತಂಡಗಳನ್ನು ರಚಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

೧ ಲಕ್ಷ ಮೇಲ್ಪಟ್ಟು ಬ್ಯಾಂಕ್ನಲ್ಲಿ ನಡೆಯುವ ಹಣದ ವ್ಯವಹಾರದ ಮೇಲೆ ನಿಗಾ ಇಡಲಾಗುತ್ತಿದೆ. ೫೦ ಸಾವಿರ ರೂ.ಗಳ ಮೆಲ್ಪಟ್ಟ ಹಣವನ್ನು ದಾಖಲೆ ಇಲ್ಲದೆ ದೊರೆತಲ್ಲಿ ಜಪ್ತ ಮಾಡಲಾಗುತ್ತದೆ. ಮತದಾನದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಮತದಾನ ಜಾಗೃತಿಗಾಗಿ ಹಲವಾರು ಕರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿ ಮತಕ್ಷೇತ್ರಕ್ಕೆ ೯ ವಿಶೇಷ ಮಾದರಿ ಮತಗಟ್ಟೆ ಸ್ಥಾಪಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ ಸಿಇಓ ಹಾಗೂ ಸ್ವೀಪ್, ಎಂಸಿಸಿ ನೋಡಲ್ ಅಧಿಕಾರಿ ಶಶಿಧರ ಕುರೇರ ತಿಳಿಸಿದ್ದಾರೆ.

*********************

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ್ತು ಪ್ರಚಾರ ಕಾರ್ಯಕ್ರಮಗಳಲ್ಲಿ ೧೮ ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದು ಬಾಲಕಾರ್ಮಿಕರ ನಿಷೇಧ ಕಾಯ್ದೆಯ ಪ್ರಕಾರ ಕಾನೂನು ಬಾಹಿರವಾಗಿದೆ.

ಚುನಾವಣಾ ಕಾರ್ಯ ಮತ್ತು ಪ್ರಚಾರಕ್ಕೆ ಮಕ್ಕಳನ್ನು ಬಳಸಿಕೊಳ್ಳದಂತೆ ಕೋಲಾರ ಜಿಲ್ಲಾ ಬಾಲಕಾರ್ಮಿಕರ ಯೋಜನಾ ಸಂಸ್ಥೆಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಅಕ್ರಂ ಪಾಷ ಆದೇಶಿಸಿದ್ದಾರೆ.

ಭಾರತ ಸರ್ಕಾರ ವಿಶ್ವ ಸಂಸ್ಥೆಯು ಅನುಮೋದಿತ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಸಂಬಂಧಿಸಿದಂತೆ ಮಕ್ಕಳ ಆರೋಗ್ಯ ಮತ್ತು ಶಿಕ್ಷಣಕ್ಕೆ ಅಪಾಯಕಾರಿಯಾದ ಕ್ಷೇತ್ರಗಳಲ್ಲಿ ಮಕ್ಕಳು ಕಾರ್ಯನಿರ್ವಹಿಸದಂತೆ ಹಾಗೂ ಮಕ್ಕಳ ಬೆಳವಣಿಗೆಗೆ ತೊಡಕನ್ನು ಉಂಟು ಮಾಡುವ ಯಾವುದೇ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಿದೆ.

ರಾಷ್ಟ್ರೀಯ ಮಕ್ಕಳ ಆಯೋಗವು ಸಹ ಚುನಾವಣಾ ಕಾರ್ಯಗಳಲ್ಲಿ ಯಾವುದೇ ಪಕ್ಷದವರು ೧೮ ವರ್ಷದೊಳಗಿನ ಮಕ್ಕಳನ್ನು ಚುನಾವಣಾ ಕಾರ್ಯಕ್ಕೆ ಬಳಸಿಕೊಳ್ಳದಂತೆ ನಿರ್ದೇಶನ ನೀಡಿದ. ಒಂದು ವೇಳೆ ಮಕ್ಕಳನ್ನು ಚುನಾವಣಾ ಕಾರ್ಯ ಮತ್ತು ಪ್ರಚಾರಕ್ಕೆ ಬಳಸಿಕೊಂಡರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

*********************

ಪ್ರತಿಯೊಬ್ಬರ ಮತವೂ ಅಮೂಲ್ಯವಾಗಿದ್ದು, ಎಲ್ಲರೂ ಚುನಾವಣಾ ವ್ಯವಸ್ಥೆಯಲ್ಲಿ ಪಾಲ್ಗೊಳ್ಳಬೇಕು. ತಮ್ಮ ಕುಟುಂಬ, ಸ್ನೇಹಿತರು ನೆರೆಹೊರೆಯವರಿಗೂ ನೈತಿಕ ಮತದಾನದ ಬಗ್ಗೆ ಜಾಗೃತಿ ಮೂಡಿಸಿ ತಮ್ಮ ಹಕ್ಕು ಚಲಾಯಿಸಲು ಪ್ರೇರೇಪಿಸಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಗರಿಮಾ ಪನ್ವಾರ್ ಸಲಹೆ ನೀಡಿದ್ದಾರೆ.

ಯಾದಗಿರಿ ನಗರದ ಗಾಂಧಿ ವೃತ್ತದಲ್ಲಿ ಆಯೋಜಿಸಲಾದ ಲೋಕಸಭಾ ಚುನಾವಣೆ-೨೦೧೪ ಕಡ್ಡಾಯ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಚಾಲನೆ ನೀಡಿ ಮಾತನಾಡಿದ ಅವರು, ಮತದಾನ ಕೇವಲ ಹಕ್ಕ? ಅಲ್ಲ, ಕರ್ತವ್ಯ ಕೂಡ ಹೌದು. ಯಾವುದೇ ಆಮಿ?ಗಳಿಗೆ ಒಳಗಾಗದೆ ಮತದಾನ ಮಾಡಬೇಕು ಎಂದು ಅವರು ನುಡಿದರು.

*********************

ಹಾವೇರಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಸಾಮಾಜಿಕ ಜಾಲತಾಣಗಳ ಮೂಲಕ ಕಾನೂನುಬಾಹಿರ ಮತ್ತು ಸುಳ್ಳು ಸುದ್ದಿಗಳು ಹರಡುವುದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸಾಮಾಜಿಕ ಜಾಲತಾಣಗಳ ಉಸ್ತುವಾರಿ ಕೋಶಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

ನೀತಿ ಸಂಹಿತೆ ಉಲಂಘನೆ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವವರ ಮೇಲೆ ನಿಗಾ ಇಡಲು ಸಾಮಾಜಿಕ ಜಾಲತಾಣ ಕೋಶವನ್ನು ಸೈಬರ್ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲಾಗಿದೆ. ಈ ಕೋಶ ದಿನದ ೨೪ ಗಂಟೆ ಕಾರ್ಯನಿರ್ವಹಿಸಲಿದೆ ಎಂದು ಮಾಹಿತಿ ನೀಡಿದ್ದಾರೆ.

*********************

ಲೋಕಸಭಾ ಚುನಾವಣೆ ಸಂಬಂಧ ಯಾವುದೇ ರಾಜಕೀಯ ಪಕ್ಷ, ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ, ಡಿಜಿಟಲ್ ಮಾಧ್ಯಮಗಳಲ್ಲಿ ಜಾಹಿರಾತು ನೀಡಲು ಜಿಲ್ಲಾ ಎಂಸಿಎಂಸಿ ಸಮಿತಿಯ ಅನುಮೋದನೆಯನ್ನು ಕಡ್ಡಾಯವಾಗಿ ಪಡೆಯಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ವೆಂಕಟೇಶ್ ತಿಳಿಸಿದ್ದಾರೆ.

ರಾಜಕೀಯ ಪಕ್ಷ, ಅಭ್ಯರ್ಥಿಗಳ ರಾಜಕೀಯ ಜಾಹಿರಾತುಗಳಿಗೆ ಪ್ರಸಾರ ಪೂರ್ವದಲ್ಲಿ ದೃಢೀಕರಣ ನೀಡುವುದು, ಹಣಕ್ಕಾಗಿ ಸುದ್ದಿಯ ಮೇಲ್ವಿಚಾರಣೆ ಹಾಗೂ ಪ್ರಸಾರ ತಡೆಯಲು ಕ್ರಮಗಳನ್ನು ಜರುಗಿಸುವುದು. ಸುಳ್ಳು ಸುದ್ದಿ, ದ್ವೇಷ ಭಾಷಣದ ಮೇಲೆ ನಿಗಾವಹಿಸಿ ವರದಿ ಸಂಗ್ರಹಿಸುವುದು ಸೇರಿದಂತೆ ಪೋಸ್ಟ್‌ಗಳ ಮೇಲ್ವಿಚಾರಣೆ ಮಾಡುವ ಕೆಲಸದ ಮೇಲೆ ಎಂಸಿಎಂಸಿ ಸಮಿತಿ ನಿಗಾ ವಹಿಸಲಿದೆ ಎಂದು ಅವರು ತಿಳಿಸಿದ್ದಾರೆ.

*********************

ಬೆಂಗಳೂರು ಗ್ರಾಮಾಂತರ ಜಿಲ್ಲೆ, ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಸಾಮಾನ್ಯ ವೀಕ್ಷಕರನ್ನಾಗಿ ನ್ಯಾಲಿ ಎಟೆ ಅವರನ್ನು ಭಾರತ ಚುನಾವಣಾ ಆಯೋಗ ನೇಮಕ ಮಾಡಿದೆ.

ಚುನಾವಣಾ ಸಾಮಾನ್ಯ ವೀಕ್ಷಕರ ದೂರವಾಣಿ ಸಂಖ್ಯೆ: ೯೪೮೧೯೧೧೪೯೪ ಆಗಿದ್ದು, ಸಾರ್ವಜನಿಕರು ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆ ಕುರಿತ ಮಾದರಿ ನೀತಿ ಸಂಹಿತೆ ಉಲ್ಲಂಘನೆ, ಚುನಾವಣಾ ಸಂಬಂಧ ದೂರುಗಳನ್ನು ದೂರವಾಣಿ ಮೂಲಕ ಅಥವಾ ಖುದ್ದಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಎನ್. ಶಿವಶಂಕರ ತಿಳಿಸಿದ್ದಾರೆ.

*********************

ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ಮಧ್ಯಾಹ್ನ ೧೨ ಗಂಟೆಯಿಂದ ಸಂಜೆ ೦೩ ಗಂಟೆಯವರೆಗೆ ಗರಿಷ್ಠ ತಾಪಮಾನ ಕಂಡುಬರುತ್ತಿರುವ ಹಿನ್ನಲೆ ತಾಯಂದಿರು, ವಯೋವೃದ್ದರು ಮತ್ತು ಚಿಕ್ಕ ಮಕ್ಕಳು ಮನೆಯಲ್ಲಿಯೇ ಇರುವಂತೆ ಎಂದು ಚಿತ್ರದುರ್ಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್ ವಿನಂತಿಸಿದ್ದಾರೆ.

ತುರ್ತು ಸಂದರ್ಭಗಳಲ್ಲಿ ಅಥವಾ ಅನಿವಾರ್ಯತೆ ಇದ್ದಾಗ ನೀರಿನ ಬಾಟೆಲ್, ಛತ್ರಿ ಮತ್ತು ಮಕ್ಕಳಿಗೆ ಬಿಸಿಲನ ಧಗೆಯಿಂದ ದೂರವಿಡಲು ಆದಷ್ಟು ನೆರಳಿನಲ್ಲಿ ಇರುವಂತೆ ಗಮನ ಹರಿಸುವಂತೆ ತಿಳಿಸಲಾಗಿದೆ.

ಗರ್ಭಿಣಿಯರು, ಆರೋಗ್ಯ ಸಮಸ್ಯೆಯಿಂದ ಬಳಲುವವರು ಮತ್ತು ನಿಗಧಿತ ಸಮಸ್ಯೆಗಳಿಗೆ ಔಷಧಿಗಳನ್ನು ತೆಗೆದುಕೊಳ್ಳುವವರು ವೈದ್ಯರ ಸಲಹೆ ಮೇರೆಗೆ ಹೊರ ಆವರಣದಲ್ಲಿ ಪ್ರಯಾಣಿಸುವರಿಗೆ ಸಲಹೆ ನೀಡಲಾಗಿದೆ.

ಎಲ್ಲಾ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೇಸಿಗೆಯಲ್ಲಿ ಬರಬಹುದಾದ ರೋಗಗಳ ಆರೈಕೆಗಾಗಿ, ಓಆರ್‌ಎಸ್, ಐವಿ ಫ್ಲೂಯಿಡ್ಸ್ ಮತ್ತು ಜೀವರಕ್ಷಕ ಔಷಧಗಳ ದಾಸ್ತಾನು ಇಟ್ಟುಕೊಳ್ಳುವಂತೆ ಹಾಗೂ ಆರೋಗ್ಯಾಧಿಕಾರಿಗಳು ನೀರಿನ ಗುಣಮಟ್ಟದ ಪರೀಕ್ಷೆಯನ್ನು ನಿಯಮಿತವಾಗಿ ಮಾಡುವಂತೆ ಸೂಚನೆ ನೀಡಲಾಗಿದೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ರೇಣುಪ್ರಸಾದ್ ಅವರು ತಿಳಿಸಿದ್ದಾರೆ.

*********************

ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ಒಣ ಹವೆ ಮುಂದುವರೆದಿದೆ.

ರಾಜ್ಯದಲ್ಲಿ ಅತೀ ಗರಿಷ್ಠ ಉಷ್ಣಾಂಶ ೪೨.೩ ಡಿಗ್ರಿ ಸೆಲ್ಸಿಯಸ್ ಕಲಬುರ್ಗಿಯಲ್ಲಿ ದಾಖಲಾಗಿದೆ.

ಮುನ್ಸೂಚನೆಯಂತೆ ಕೊಡಗು, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿ ಮುಂದಿನ ೩ ದಿನಗಳಲ್ಲಿ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಅತೀ ಹೆಚ್ಚು ತಾಪಮಾನ ಇರಲಿದೆ.

ಬೆಂಗಳೂರು ನಗರದಲ್ಲಿ ಬೆಳಿಗ್ಗೆ ಭಾಗಶಃ ಮೋಡವಿರಲಿದ್ದು, ಸಂಜೆ ವೇಳೆ ನಿರ್ಮಲ ಆಕಾಶವಿರುತ್ತದೆ. ಗರಿಷ್ಠ ಉಷ್ಣಾಂಶ ೩೭ ಮತ್ತು ಕನಿಷ್ಠ ಉಷ್ಣಾಂಶ ೨೩ ಡಿಗ್ರಿ ಸೆಲ್ಸಿಯಸ್ ಇರುವ ಸಾಧ್ಯತೆ ಎಂದು ಹವಾಮಾನ ಇಲಾಖೆ ಮನ್ಸೂಚನೆ ನೀಡಿದೆ.

***********ಮುಕ್ತಾಯ**********